ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2018–19 ದಿನಾಂಕ: 31–12–2018

**ಸಂಖ್ಯೆ: 1581/1681**

# ಪತ್ರಿಕಾ ಪ್ರಕಟಣೆ

## ಸಂದೇಶ

**ಬೆಂಗಳೂರು, ಡಿಸೆಂಬರ್ 31, (ಕರ್ನಾಟಕ ವಾರ್ತೆ)**

**ಹೊಸವರ್ಷ – 2019 ರಾಜ್ಯದ ಸಮಸ್ತ ಜನರಿಗೆ ಸಂತೋಷ, ಶಾಂತಿ ಹಾಗೂ ಸಮೃದ್ಧಿ ತರಲಿ ಎಂದು ಕರ್ನಾಟಕ ರಾಜ್ಯಪಾಲರಾದ ವಾಜುಭಾಯಿ ವಾಲಾ ಅವರು ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ.**

**ಸಂಖ್ಯೆ: 1582/1682**

## ಪಂಚಾಯತ್ ಉಪಚುನಾವಣೆ
## ಮತದಾನದ ದಿನದಂದು ಕಾರ್ಮಿಕರಿಗೆ ವೇತನ ಸಹಿತ ರಜೆ

ಬೆಂಗಳೂರು, ಡಿಸೆಂಬರ್ 31 , (ಕರ್ನಾಟಕ ವಾರ್ತೆ)

ಜನವರಿ 2 ರಂದು ರಾಜ್ಯದ ವಿವಿಧ ತಾಲ್ಲೂಕು ಹಾಗೂ ಗ್ರಾಮ ಪಂಚಾಯಿತಿ ಸದಸ್ಯ ಸ್ಥಾನಗಳಿಗೆ ನಡೆಯಲಿರುವ ಉಪ ಚುನಾವಣೆಯ ಮತದಾನ ದಿನದಂದು ಅರ್ಹ ಮತದಾರ ಕಾರ್ಮಿಕರಿಗೆ ವೇತನ ಸಹಿತ ರಜೆಯನ್ನು ಘೋಷಿಸಿ ಕಾರ್ಮಿಕ ಇಲಾಖೆಯ ಆಯುಕ್ತರು ಆದೇಶ ಹೊರಡಿಸಿದ್ದಾರೆ.

ದಾವಣಗೆರೆ ಜಿಲ್ಲೆ ಹರಪ್ಪನಹಳ್ಳಿ ತಾಲ್ಲೂಕು ಪಂಚಾಯಿತಿ 24 – ಹಲವಾಗಲು ಕ್ಷೇತ್ರ. ವಿಜಯಪುರ ಜಿಲ್ಲೆ ಸಿಂಧಗಿ ತಾಲ್ಲೂಕು ಪಂಚಾಯಿತಿ 32– ಮಲಘಾಣ ಕ್ಷೇತ್ರ ಮತ್ತು ಬಳ್ಳಾರಿ

ಜಿಲ್ಲೆಯ ಹೂವಿನಹಡಗಲಿ ತಾಲ್ಲೂಕು ಪಂಚಾಯಿತಿ, 11– ಮೈಲಾರ ಕ್ಷೇತ್ರಗಳಿಗೆ ವಿವಿಧ ಕಾರಣಗಳಿಂದ ಆಕಸ್ಮಿಕವಾಗಿ ತೆರವಾಗಿರುವ ಸದಸ್ಯರ ಸ್ಥಾನಗಳಿಗೆ ಉಪ ಚುನಾವಣೆಯನ್ನು ಮತ್ತು ಜನವರಿ ಮತ್ತು ಫೆಬ್ರವರಿ – 2019 ರ ಮಾಹೆಯಲ್ಲಿ ಅವಧಿ ಮುಕ್ತಾಯವಾಗುವ 8 ಗ್ರಾಮ ಪಂಚಾಯಿತಿಗಳಿಗೆ ಹಾಗೂ ವಿವಿಧ ಕಾರಣಗಳಿಂದ ತೆರವಾಗಿರುವ ಗ್ರಾಮ ಪಂಚಾಯಿತಿ ಸದಸ್ಯ ಸ್ಥಾನಗಳಿಗೆ ಜನವರಿ 2 ರಂದು ಉಪ ಚುನಾವಣೆ ನಡೆಯಲಿದೆ.

ಮತದಾನ ನಡೆಯಲಿರುವ ಸದರಿ ಕ್ಷೇತ್ರಗಳ ವ್ಯಾಪ್ತಿಯಲ್ಲಿ ನೋಂದಾಯಿತರಾದ ಅರ್ಹ ಮತದಾರರಾಗಿರುವ ಎಲ್ಲಾ ಕಾರ್ಮಿಕರಿಗೆ ಮತ ಚಲಾಯಿಸಲು ಅನುಕೂಲವಾಗುವಂತೆ ಸಂಬಂಧಪಟ್ಟ ಅಂಗಡಿಗಳು, ವಾಣಿಜ್ಯ ಸಂಸ್ಥೆಗಳು, ಕಾರ್ಖಾನೆಗಳು ಮತ್ತು ಇತರೆ ಸಂಸ್ಥೆಗಳು ಆದೇಶದನುಸಾರ ಪ್ರಜಾಪ್ರತಿನಿಧಿ ಕಾಯ್ದೆ 1951 ರ ಕಲಂ 135ಬಿ ರನ್ವಯ ಮತ್ತು ಕರ್ನಾಟಕ ಪಂಚಾಯತ್ ರಾಜ್ (ಚುನಾವಣೆಯನ್ನು ನಡೆಸುವ) ನಿಯಮಗಳು, 1993 ರ ನಿಯಮ 114 ರನ್ವಯ ಮತದಾನ ನಡೆಯಲಿರುವ ಕ್ಷೇತ್ರಗಳಲ್ಲಿ ಅರ್ಹರಿರುವ ಎಲ್ಲಾ ಕಾರ್ಮಿಕ ಮತದಾರರಿಗೆ ದಿನಾಂಕ: 02–01–2019 (ಬುಧವಾರ) ರಂದು ವೇತನ ಸಹಿತ ರಜೆ ನೀಡಿ, ಎಲ್ಲಾ ಅರ್ಹ ಕಾರ್ಮಿಕರು ಸಂವಿಧಾನಾತ್ಮಕ/ಶಾಸನಾತ್ಮಕ ಹಕ್ಕಾದ ಮತವನ್ನು ಕಾನೂನಿನ್ವಯ ಚಲಾಯಿಸಲು ಅನುವು ಮಾಡಿಕೊಟ್ಟು ಚುನಾವಣಾ ಆಯೋಗದ ಆದೇಶವನ್ನು ನಿಯಮಾನುಸಾರ ಪಾಲಿಸಲು ಸೂಚಿಸಿ ಕಾರ್ಮಿಕ ಇಲಾಖಾ ಆಯುಕ್ತರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಸಂಖ್ಯೆ: 1583/1683**

## ಮತದಾನ ದಿನದಂದು ರಜೆ ಘೋಷಣೆ
## ತುರ್ತು ಸೇವೆಗೆ ಅನ್ವಯಿಸುವುದಿಲ್ಲ

ಬೆಂಗಳೂರು, ಡಿಸೆಂಬರ್ 31 , (ಕರ್ನಾಟಕ ವಾರ್ತೆ)

ರಾಜ್ಯದ ವಿವಿಧ ತಾಲ್ಲೂಕು ಹಾಗೂ ಗ್ರಾಮ ಪಂಚಾಯಿತಿ ಸದಸ್ಯ ಸ್ಥಾನಗಳಿಗೆ ನಡೆಯಲಿರುವ ಉಪ ಚುನಾವಣೆಯ ಮತದಾನ ದಿನದಂದು ಆಯಾ ಕ್ಷೇತ್ರಗಳ

ವ್ಯಾಪ್ತಿಯಲ್ಲಿರುವಂತೆ ಮತದಾರರು ಮತ ಚಲಾಯಿಸಲು ಅನುಕೂಲವಾಗುವಂತೆ ಆಯಾ ಮತ ಕ್ಷೇತ್ರಗಳ ಎಲ್ಲಾ ರಾಜ್ಯ ಸರ್ಕಾರಿ ಕಚೇರಿಗಳಿಗೆ, ಶಾಲಾ ಕಾಲೇಜುಗಳಿಗೆ, (ಅನುದಾನಿತ ಶಿಕ್ಷಣ ಸಂಸ್ಥೆಗಳು ಒಳಗೊಂಡಂತೆ) ಹಾಗೂ ಸ್ವಾಮ್ಯದ ಅಂಗ ಸಂಸ್ಥೆಗಳು ಒಳಗೊಂಡಂತೆ ಜನವರಿ 2 ರಂದು ಸಾರ್ವತ್ರಿಕ ರಜೆಯನ್ನು ಘೋಷಿಸಿದೆ.

ರಾಜ್ಯದಲ್ಲಿ ವಿವಿಧ ಕಾರಣದಿಂದ ಖಾಲಿಯಾದ 03 ತಾಲ್ಲೂಕು ಪಂಚಾಯತಿಯ 03 ತಾಲ್ಲೂಕು ಪಂಚಾಯತ್ ಕ್ಷೇತ್ರಗಳಿಗೆ ಹಾಗೂ 29 ಜಿಲ್ಲೆಗಳ 240 ಗ್ರಾಮ ಪಂಚಾಯಿತಿಗಳ 330 ಸ್ಥಾನಗಳಿಗೆ ಉಪ ಚುನಾವಣೆ ಮತ್ತು ಅವಧಿ ಮೀರಿ ಮುಕ್ತಾಯಗೊಂಡ 04 ತಾಲ್ಲೂಕುಗಳ 8 ಗ್ರಾಮ ಪಂಚಾಯಿತಿಗಳಿಗೆ ಚುನಾವಣೆಯನ್ನು ದಿನಾಂಕ: 02-01-2019 ರಂದು ನಿಗದಿಪಡಿಸಿ ರಾಜ್ಯ ಚುನಾವಣಾ ಆಯೋಗ ಅಧಿಸೂಚನೆ ಹೊರಡಿಸಿರುತ್ತದೆ.

ಈ ರಜೆಯು ತುರ್ತು ಸೇವೆಗಳಿಗೆ ಅನ್ವಯಿಸುವುದಿಲ್ಲ ಈ ಚುನಾವಣಾ ಕಾರ್ಯಗಳಿಗೆ ನಿಯೋಜಿಸಲ್ಪಟ್ಟ ಎಲ್ಲಾ ಸರ್ಕಾರಿ ನೌಕರರುಗಳು ಚುನಾವಣಾ ಕಾರ್ಯಕ್ಕೆ ಹಾಜರಾಗತಕ್ಕದ್ದು ಎಂದು ಆದೇಶದಲ್ಲಿ ತಿಳಿಸಲಾಗಿದೆ.

**ಸಂಖ್ಯೆ: 1584/1684**

## ಶಿಲ್ಪಕಲಾ ವ್ಯಾಸಂಗದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಆಹ್ವಾನ

ಬೆಂಗಳೂರು, ಡಿಸೆಂಬರ್ 31 , (ಕರ್ನಾಟಕ ವಾರ್ತೆ)

ಕರ್ನಾಟಕ ಶಿಲ್ಪಕಲಾ ಅಕಾಡೆಮಿಯು 2018-19ನೇ ಸಾಲಿಗೆ ಶಿಲ್ಪಕಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಸಾಮಾನ್ಯ ವರ್ಗ/ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಆರ್ಹ ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸದ ಅವಧಿಯಲ್ಲಿ ವಿದ್ಯಾರ್ಥಿ ವೇತನ ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಕರ್ನಾಟಕದ ಯಾವುದೇ ವಿಶ್ವವಿದ್ಯಾಲಯಗಳಲ್ಲಿ ಅಂಗೀಕೃತಗೊಂಡ ದೃಶ್ಯಕಲಾ ಶಿಕ್ಷಣದ ಕಾಲೇಜುಗಳು, ಸರ್ಕಾರದಿಂದ ಮಾನ್ಯತೆ ಪಡೆದು ಗುರುಕುಲ ಪದ್ಧತಿಯಲ್ಲಿ ಶಿಕ್ಷಣ ಪಡೆಯುತ್ತಿರುವವರು, ಡಿಪ್ಲೊಮೊ /ಪದವಿ/ಸ್ನಾತಕೋತ್ತರ ಪದವಿಗಳಲ್ಲಿ ಶಿಲ್ಪಕಲಾ ವಿಷಯದಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡಲಾಗುವುದು.

ಸಾಂಪ್ರದಾಯಿಕ ಮತ್ತು ಸಮಕಾಲೀನ ಶೈಲಿಯ ಶಿಲ್ಪಕಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಸಾಮಾನ್ಯ ವರ್ಗ/ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಅರ್ಹ ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸದ ಅವಧಿಯಲ್ಲಿ ಒಮ್ಮೆ ಮಾತ್ರ ವಿದ್ಯಾರ್ಥಿ ವೇತನ ನೀಡಲಾಗುವುದು.

ಕರ್ನಾಟಕ ಶಿಲ್ಪಕಲಾ ಅಕಾಡೆಮಿ ವತಿಯಿಂದ ಈ ಹಿಂದೆ ವಿದ್ಯಾರ್ಥಿ ವೇತನ ಪಡೆದಿರುವ ವಿದ್ಯಾರ್ಥಿಗಳ ಅರ್ಜಿಯನ್ನು ವಿದ್ಯಾರ್ಥಿ ವೇತನಕ್ಕೆ ಪರಿಗಣಿಸುವುದಿಲ್ಲ.

ವಿದ್ಯಾರ್ಥಿವೇತನ ಪಡೆಯುವ ವಿದ್ಯಾರ್ಥಿಯು ಯಾವುದೇ ಮಾಧ್ಯಮದಲ್ಲಾದರೂ ಕನಿಷ್ಟ ಗಾತ್ರದ ಒಂದು ಉತ್ತಮ ಶಿಲ್ಪಕಲಾಕೃತಿ ರಚಿಸಿ ಅಕಾಡೆಮಿಗೆ ನೀಡಬೇಕಾಗುತ್ತದೆ.

ವಿದ್ಯಾರ್ಥಿಯು ಕಲಿಯುತ್ತಿರುವ ಸಂಸ್ಥೆ/ವಿಶ್ವವಿದ್ಯಾಲಯದ ಮುಖ್ಯಸ್ಥರಿಂದ ದೃಢೀಕರಿಸಿ ನಿಗಧಿತ ಅರ್ಜಿಯನ್ನು ಸಲ್ಲಿಸತಕ್ಕದು. ವಿದ್ಯಾರ್ಥಿಯು ಅರ್ಜಿಯೊಂದಿಗೆ ಇತ್ತೀಚಿನ ತಮ್ಮ ಎರಡು ಭಾವಚಿತ್ರ ಹಾಗೂ ತಾವು ರಚಿಸಿದ ಕಲಾಕೃತಿಗಳ ಆರು ಛಾಯಾಚಿತ್ರಗಳನ್ನು ಸಲ್ಲಿಸತಕ್ಕದ್ದು.

ವಿದ್ಯಾರ್ಥಿ ವೇತನ ಪಡೆಯಲಿರುವ ವಿದ್ಯಾರ್ಥಿಗಳು ವಯೋಮಿತಿ 16 ರಿಂದ 30 ವರ್ಷ ಒಳಗಿರಬೇಕು.

**ದಿನಾಂಕ : 31-01-2019ರ ಒಳಗಾಗಿ ಅಕಾಡೆಮಿಗೆ ಅರ್ಜಿಯನ್ನು ರಿಜಿಸ್ಟ್ರಾರ್, ಕರ್ನಾಟಕ ಶಿಲ್ಪಕಲಾ ಅಕಾಡೆಮಿ, ಕನ್ನಡ ಭವನ, 1ನೇ ಮಹಡಿ, ಜೆ.ಸಿ.ರಸ್ತೆ, ಬೆಂಗಳೂರು-560002 ಇವರಿಗೆ ತಲುಪಿಸಲು ಕೋರಿದೆ. ಕೊನೆಯ ದಿನಾಂಕದ ನಂತರ ಬಂದ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ. ಹೆಚ್ಚಿನ ವಿವರಗಳಿಗಾಗಿ ಅಕಾಡೆಮಿ ದೂರವಾಣಿ ಸಂಖ್ಯೆ: 080-22278725 ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.**

**ಸಂಖ್ಯೆ: 1585/1685**

## <u>ಸಚಿವರ ಪ್ರವಾಸ</u>

<u>ಬೆಂಗಳೂರು, ಡಿಸೆಂಬರ್ 31 , (ಕರ್ನಾಟಕ ವಾರ್ತೆ)</u>

ಕೃಷಿ ಸಚಿವ ಎನ್.ಹೆಚ್. ಶಿವಶಂಕರ ರೆಡ್ಡಿ ಅವರು 2019 ರ ಜನವರಿ 1 ರಿಂದ 3 ರವರೆಗೆ ಧಾರವಾಡ, ಬೆಳಗಾವಿ ಮತ್ತು ವಿಜಯಪುರ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡು, ಜನವರಿ 3 ರಂದೇ ನಗರಕ್ಕೆ ಆಗಮಿಸಲಿರುವ ಅವರು

ಮರುದಿನ ಜನವರಿ 4 ಹಾಗೂ 5 ರಂದು ಹಾವೇರಿ ಮತ್ತು ಬಳ್ಳಾರಿ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅದೇ ದಿನ ಸಂಜೆ ನಗರಕ್ಕೆ ಹಿಂದಿರುಗಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

**ಸಂಖ್ಯೆ: 1586/1686**

# ಕ್ರೀಡಾಪಟುಗಳ ಆಯ್ಕೆ ಪ್ರಕ್ರಿಯೆ

ಬೆಂಗಳೂರು, ಡಿಸೆಂಬರ್ 31 , (ಕರ್ನಾಟಕ ವಾರ್ತೆ)

ಜಿಲ್ಲಾ ಪಂಚಾಯತ್ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ 2019-20 ನೇ ಸಾಲಿಗೆ ಜಿಲ್ಲಾ ರಾಜ್ಯ ಕ್ರೀಡಾ ಶಾಲೆ/ವಸತಿ ನಿಲಯಗಳ ಕ್ರೀಡಾಪಟುಗಳ ಆಯ್ಕೆ ಪ್ರಕ್ರಿಯೆ ಜನವರಿ 7 ರಿಂದ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಆಯೋಜಿಸಲಾಗಿದೆ.

4ನೇ ತರಗತಿ (ದಿನಾಂಕ: 01-06-2019 ಕ್ಕೆ 11 ವರ್ಷ ಮೀರಿರಬಾರದು) 7ನೇ ತರಗತಿ (ದಿನಾಂಕ: 01-06-2019 ಕ್ಕೆ 14 ವರ್ಷ ಮೀರಿರಬಾರದು) ಹಾಗೂ 10 ನೇ ತರಗತಿಯಲ್ಲಿ (ದಿನಾಂಕ:01-06-2019 ಕ್ಕೆ 18 ವರ್ಷ ಮೀರಿರಬಾರದು) ವ್ಯಾಸಂಗ ಮಾಡುತ್ತಿರುವ ಬಾಲಕ/ಬಾಲಕಿಯರು ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸಲು ಅರ್ಹರಾಗಿರುತ್ತಾರೆ.

07-01-2019 ರಂದು ಆನೇಕಲ್ ತಾಲ್ಲೂಕು ಕ್ರೀಡಾಂಗಣದಲ್ಲಿ ದಿನಾಂಕ 08-01-2019 ರಂದು ಬೆಂಗಳೂರು ದಕ್ಷಿಣ ತಾಲ್ಲೂಕು ಹೊನಗನಹಟ್ಟಿ ತಾಲ್ಲೂಕು ಕ್ರೀಡಾಂಗಣಲದಲ್ಲಿ, ದಿನಾಂಕ: 09-01-2019 ರಂದು ಡಿ.ಜಿ. ಹಳ್ಳಿ ತಾಲ್ಲೂಕು ಕ್ರೀಡಾಂಗಣದಲ್ಲಿ, ದಿನಾಂಕ: 10-01-2019 ರಂದು ಬೆಂಗಳೂರು ಪೂರ್ವ ತಾಲ್ಲೂಕು ಕೆ.ಆರ್. ಪುರಂ ಸರ್ಕಾರಿ ಶಾಲೆ ಆವರಣದಲ್ಲಿ, ದಿನಾಂಕ: 11-01-2019 ರಂದು ಯಲಹಂಕ ಸರ್ಕಾರಿ ಶಾಲೆ ಆವರಣದಲ್ಲಿ ಬೆಳಿಗ್ಗೆ 10.00 ಗಂಟೆಯಿಂದ ಆಯ್ಕೆ ಪ್ರಕ್ರಿಯೆ ನಡೆಯಲಿದೆ.

ಹೆಚ್ಚಿನ ಮಾಹಿತಿಗೆ ಶ್ರೀ ಪ್ರಕಾಶ್ ಜೂಡೋ ತರಬೇತುದರರು-9980649304, ಶ್ರೀ ಚಿನ್ನಪ್ಪ ಟೆನ್ನೀಸ್ ತರಬೇತುದಾರರು -9844173168 ಶ್ರೀ ಮಂಜುನಾಥ್ ಲಮಾಣಿ ಫಿಟ್‌ನೆಸ್ ಟ್ರೇನರ್-9731823039 ಶ್ರೀ ಸೌರವಗುಹ ಬಾಕ್ಸಿಂಗ ತರಬೇತುದಾರರು-9038357222 ಶ್ರೀ ರವಿ ಅಣ್ಣಪ್ಪ ಅಥ್ಲೆಟಿಕ್ಸ್ ತರಬೇತುದಾರರು-9900931136, ಶ್ರೀ ಅನೂಪ್ ಎ. ವೈ. ಬಾಸ್ಕೆಟ್‌ಬಾಲ್ ತರಬೇತುದಾರರು-9448000563 ಅಥವಾ ಸಹಾಯಕ ನಿರ್ದೇಶಕರು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಬೆಂಗಳೂರು ನಗರ ಜಿಲ್ಲೆ ಶ್ರೀ

ಕಂಠೀರವನ ಕ್ರೀಡಾಂಗಣ ಸಂಕೀರ್ಣ ಮೊ.ಸಂ. 9480886545 ಇವರನ್ನು ಖುದ್ದಾಗಿ ಅಥವಾ ಆ ಮೇಲ್ಕಂಡ ತರಬೇತುದಾರರನ್ನು ದೂರವಾಣಿಯ ಮೂಲಕ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

**ಸಂಖ್ಯೆ: 1587/1687**

## ಸಚಿವರ ಪ್ರವಾಸ

**ಬೆಂಗಳೂರು, ಡಿಸೆಂಬರ್ 31, (ಕರ್ನಾಟಕ ವಾರ್ತೆ)**

ಗಣಿ ಮತ್ತು ಭೂ ವಿಜ್ಞಾನ ಸಚಿವ ಶ್ರೀ ರಾಜಶೇಖರ ಬಿ. ಪಾಟೀಲ ಅವರು ಜನವರಿ 1 ರಿಂದ 3 ರವರೆಗೆ  ಬೀದರ್ ಮತ್ತು ಕಲಬುರಗಿ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳುವರು ಎಂದು ಪ್ರಕಟಣೆ ತಿಳಿಸಿದೆ.

## ಬೆಂಗಳೂರು ಜಲಮಂಡಲಿ : ಜನವರಿ 01 ರಂದು ಸಕಾನಿಅ(ಪಶ್ಚಿಮ-1), ಸಕಾನಿಅ(ಆಗ್ನೇಯ-1) ಮತ್ತು ಸಕಾನಿಅ(ನೈರುತ್ಯ-1) ಉಪವಿಭಾಗಗಳಲ್ಲಿ ನೀರಿನ ಅದಾಲತ್

**ಬೆಂಗಳೂರು, ಡಿಸೆಂಬರ್ 31, (ಕರ್ನಾಟಕ ವಾರ್ತೆ)**

ಬೆಂಗಳೂರು ಜಲಮಂಡಲಿಯ ಸಕಾನಿಅ(ಪಶ್ಚಿಮ-1), ಸಕಾನಿಅ(ಆಗ್ನೇಯ-1) ಮತ್ತು ಸಕಾನಿಅ(ನೈರುತ್ಯ-1) ಉಪವಿಭಾಗಗಳಲ್ಲಿ ಮಂಗಳವಾರ ದಿನಾಂಕ:01.01.2019 ರಂದು ನೀರಿನ ಬಿಲ್ಲು, ನೀರು ಮತ್ತು ಒಳಚರಂಡಿ ಸಂಪರ್ಕ ಕಲ್ಪಿಸುವಲ್ಲಿನ ವಿಳಂಬ, ಗೃಹ ಬಳಕೆಯಿಂದ ಗೃಹೇತ್ತರ ಬಳಕೆ ಪರಿವರ್ತನೆ ವಿಳಂಬ ಮತ್ತಿತರ ಕುಂದುಕೊರತೆಗಳಿಗೆ ಸಂಬಂಧಿಸಿದಂತೆ ನೀರಿನ ಅದಾಲತ್ ಅನ್ನು ಬೆಳಗ್ಗೆ 9.30 ರಿಂದ 11:00 ಗಂಟೆಯವರೆಗೆ ನಡೆಸಲಾಗುತ್ತದೆ.

ದಿನಾಂಕ:01.01.2019 ರಂದು ಸಕಾನಿಅ(ಪಶ್ಚಿಮ-1) ಉಪವಿಭಾಗದ ವ್ಯಾಪ್ತಿಯ ಮಾಗಡಿ ರಸ್ತೆ 1&2, ಹೊಸಹಳ್ಳಿ ಪಂಪ್‌ಹೌಸ್, ಮೈಸೂರು ರಸ್ತೆ, ಸೇವಾ ಠಾಣೆ ವ್ಯಾಪ್ತಿಯ ಕುಂದುಕೊರತೆಗಳಿಗೆ ಸಂಬಂಧಿಸಿದಂತೆ ನೆಲಮಹಡಿ, ಅರ್ಕಾವತಿ ಭವನ, 5ನೇ ಮುಖ್ಯರಸ್ತೆ, 9ನೇ ಅಡ್ಡರಸ್ತೆ, ಆರ್.ಪಿ.ಸಿ ಲೇಔಟ್ ಇಲ್ಲಿನ ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರರು (ಪಶ್ಚಿಮ-1) ಕಚೇರಿಯಲ್ಲಿ ಸಮಸ್ಯೆಗಳನ್ನು ಪರಿಶೀಲಿಸಿ ಬಗೆಹರಿಸಲಾಗುತ್ತದೆ.

ಹೆಚ್ಚಿನ ಮಾಹಿತಿಗೆ ಸಂಪರ್ಕಿಸಬೇಕಾದ ದೂರವಾಣಿ ಸಂಖ್ಯೆ: ಕಾರ್ಯನಿರ್ವಾಹಕ ಅಭಿಯಂತರರು (ಪಶ್ಚಿಮ): 22349171. ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರರು (ಪಶ್ಚಿಮ-1) ಉಪವಿಭಾಗ: 23500013.

ಸಕಾನಿಅ(ಆಗ್ನೇಯ-1) ಉಪವಿಭಾಗದ ವ್ಯಾಪ್ತಿಯ ಹಲಸೂರು, ದೊಮ್ಮಲೂರು, ಸಿ.ಎಲ್.ಆರ್ & ಜಾನ್ಸನ್ ಮಾರ್ಕೆಟ್ ಸೇವಾ ಠಾಣೆ ವ್ಯಾಪ್ತಿಯ ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ಆಡೋ ಮಹಲ್ ಎದುರು, ಹಳೆ ಮದ್ರಾಸ್ ರಸ್ತೆ, ಇಲ್ಲಿನ ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರರು(ಆಗ್ನೇಯ-1) ಕಚೇರಿಯಲ್ಲಿ ಸಮಸ್ಯೆಗಳನ್ನು ಪರಿಶೀಲಿಸಿ ಬಗೆಹರಿಸಲಾಗುತ್ತದೆ.

ಹೆಚ್ಚಿನ ಮಾಹಿತಿಗೆ ಸಂಪರ್ಕಿಸಬೇಕಾದ ದೂರವಾಣಿ ಸಂಖ್ಯೆ: ಕಾರ್ಯನಿರ್ವಾಹಕ ಅಭಿಯಂತರರು(ಆಗ್ನೇಯ-1): 22945169. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಆಗ್ನೇಯ-1): 22945169.

ಸಕಾನಿಅ(ನೈರುತ್ಯ-1) ಉಪವಿಭಾಗದ ವಿ.ವಿ.ಪುರಂ, ಸುಧಾಮನಗರ-2, ಕೆಂಪೇಗೌಡನಗರ, ಜಗಜೀವನ್‌ರಾಮ್ ನಗರ, ಚಾಮರಾಜ ಪೇಟೆ ಸೇವಾ ಠಾಣೆ ವ್ಯಾಪ್ತಿಯ ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ವಿ.ವಿ.ಪುರಂ ಇಲ್ಲಿನ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ನೈರುತ್ಯ-1) ಕಚೇರಿಯಲ್ಲಿ ಸಮಸ್ಯೆಗಳನ್ನು ಪರಿಶೀಲಿಸಿ ಬಗೆಹರಿಸಲಾಗುತ್ತದೆ.

ಹೆಚ್ಚಿನ ಮಾಹಿತಿಗೆ ಸಂಪರ್ಕಿಸಬೇಕಾದ ದೂರವಾಣಿ ಸಂಖ್ಯೆ: ಕಾರ್ಯನಿರ್ವಾಹಕ ಅಭಿಯಂತರರು(ನೈರುತ್ಯ): 22945196. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ನೈರುತ್ಯ-1) ಉಪವಿಭಾಗ: 22945193.

ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ಮಂಡಳಿಯ 24/7 ದೂರು ನಿರ್ವಹಣಾ ಕೇಂದ್ರದ ದೂರವಾಣಿ ಸಂಖ್ಯೆ:22238888, ಸಹಾಯವಾಣಿ 1916 ಹಾಗೂ ವಾಟ್ಸ್‌ಆಪ್ ಸಂಖ್ಯೆ: 8762228888 ಗೆ ಸಂಪರ್ಕಿಸಬಹುದಾಗಿದೆ.

ಸಾರ್ವಜನಿಕರು ಮೇಲಿನ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಲು ಈ ಅದಾಲತ್ ಸೌಲಭ್ಯ ಬಳಸಿಕೊಳ್ಳ ಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.